# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 949 |
| ಮಾನ್ಯ ಸದಸ್ಯರ ಹೆಸರು | ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 22/02/2024 |
| ಉತ್ತರಿಸುವ ಸಚಿವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ನೋಂದಾಯಿತ ಕಾರ್ಮಿಕರ ಸಂಖ್ಯೆ ಎಷ್ಟು; | ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಗೆ ಕಲಬುರಗಿ ಜಿಲ್ಲೆಯಲ್ಲಿ ಒಟ್ಟು ಸಂಖ್ಯೆ: 3,70,405 ಮತ್ತು ಯಾದಗಿರಿ ಜಿಲ್ಲೆಯಲ್ಲಿ ಒಟ್ಟು 1,77,403 ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಫಲಾನುಭವಿಗಳಾಗಿ ನೋಂದಣಿಯಾಗಿರುತ್ತಾರೆ. |
| ಆ) | ಇದುವರೆವಿಗೂ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ನೋಂದಾವಣೆಯಾಗದಿರುವ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರನ್ನು ನೋಂದಾಯಿಸಲು ಸರ್ಕಾರ ಕೈಗೊಂಡ ಕ್ರಮಗಳೇನು: (ವಿವರ ನೀಡುವುದು) | ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ವತಿಯಿಂದ ನೋಂದಣಿಯಾಗದಿರುವ ಕಾರ್ಮಿಕರನ್ನು ನೋಂದಾಯಿಸಲು ವ್ಯಾಪಕ ಪ್ರಚಾರವನ್ನು ಈ ಕೆಳಕಂಡ ಮಾಹಿತಿ ಶಿಕ್ಷಣ ಸಂವಹನ (ಐಇಸಿ) ಕಾರ್ಯಕ್ರಮಗಳ ಮೂಲಕ ರಾಜ್ಯಾದಾದ್ಯಂತ ಹಮ್ಮಿಕೊಳ್ಳಲಾಗಿರುತ್ತದೆ.<br><br>ಐಇಸಿ ಚಟುವಟಿಕೆಗಳಾದ ಆಟೋ ಬ್ರ್ಯಾಂಡಿಂಗ್, ಟಿನ್‌ಪ್ಲೇಟ್ಸ್ ಅಳವಡಿಕೆ, ಶಿಕ್ಷಣ ಎಕ್ಸ್‌ಪೋಗಳಲ್ಲಿ ಭಾಗವಹಿಸಿ ಮಂಡಳಿಯ ಶೈಕ್ಷಣಿಕ ಸೌಲಭ್ಯಗಳ ಕುರಿತು ಪ್ರಚಾರ, ಗೋಡೆಬರಹ, ಕಿಯೋಸ್ಕ್‌ಗಳ ಅಳವಡಿಕೆ, ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣಗಳಲ್ಲಿ ಶ್ರಾವ್ಯ ಮಾಧ್ಯಮದ ಮೂಲಕ ಪ್ರಚಾರ, ಸನ್‌ಬೋರ್ಡ್ ಅಳವಡಿಕೆ, ಬಸ್ ಬ್ರಾಂಡಿಂಗ್, ದಸರಾ ಸಂದರ್ಭದಲ್ಲಿ ಎಲ್‌ಇಡಿ ವಾಹನ ಬ್ರಾಂಡಿಂಗ್, ರೈಲ್ವೆ ಬ್ರ್ಯಾಂಡಿಂಗ್, ರೈಲ್ವೆ ಸ್ಟೇಷನ್ ಬ್ರ್ಯಾಂಡಿಂಗ್ ಜಾಹೀರಾತು, ಮೈಸೂರು ರೈಲ್ವೆ ನಿಲ್ದಾಣದಲ್ಲಿ ವೀಡಿಯೋ ಜಾಹೀರಾತು, ಸಾಮಾಜಿಕ ಮಾಧ್ಯಮ ಚಟುವಟಿಕೆಗಳು, ಹೋರ್ಡಿಂಗ್ ಅಳವಡಿಕೆ, ಕಿರುಚಿತ್ರ/ಸಾಕ್ಷ್ಯ ಚಿತ್ರಗಳ ತಯಾರಿಕೆ, ಕಾರ್ಮಿಕ ಇಲಾಖೆ ಮತ್ತು ಮಂಡಳಿಯ ಯೋಜನೆಗಳನ್ನೊಳಗೊಂಡ ಕ್ಯಾಲೆಂಡರ್‌ಗಳ ಮುದ್ರಣ, ಪತ್ರಿಕಾ ಜಾಹೀರಾತು ಮುಂತಾದವುಗಳ ಮೂಲಕ ಕಾರ್ಮಿಕರಲ್ಲಿ ಜಾಗೃತಿ ಮೂಡಿಸಲಾಗಿರುತ್ತದೆ. |

| | | |
|---|---|---|
| | | ಮುಂದುವರಿದಂತೆ ಕಾರ್ಮಿಕ ದಿನಾಚರಣೆ, ಕಾರ್ಮಿಕ ಅದಾಲತ್ ಹಾಗೂ 75ನೇ ಸ್ವಾತಂತ್ರ್ಯ ಮಹೋತ್ಸವ, ಅಮೃತ ಮಹೋತ್ಸವದಂತಹ ವಿಶೇಷ ಸಂದರ್ಭಗಳಲ್ಲಿ ಕ್ಯಾಂಪೇನ್‌ಗಳನ್ನು ನಡೆಸಿ ರೇಡಿಯೋ ಜಾಹೀರಾತು, ಸ್ಕೇಟಿಂಗ್ ಜಾತ (Rally), ಟಿ.ವಿ ಜಾಹೀರಾತು, ಆಟೋ ಪ್ರಚಾರ, ವಾಹನ ಬ್ರ್ಯಾಂಡಿಂಗ್, ಆಟೋಮೇಟೆಡ್ ಕಾಲ್ಸ್, ಆಟೋಮೇಟೆಡ್ ಮೆಸೇಜಸ್, ಪೋಸ್ಟ ಮುದ್ರಣ, ಭಿತ್ತಿಪತ್ರಗಳ ಮುದ್ರಣ ಬೀದಿ ನಾಟಕ ಮುಂತಾದ ಚಟುವಟಿಕೆಗಳ ಮೂಲಕ ಕಾರ್ಮಿಕರಲ್ಲಿ ಸದರಿ ವಿಶೇಷ ಕಾರ್ಯಕ್ರಮಗಳ ಕುರಿತು ಹಾಗೂ ಮಂಡಳಿಯ ಯೋಜನೆಗಳ ಕುರಿತು ಪ್ರಚಾರ ನಡೆಸಲಾಗಿರುತ್ತದೆ. |
| ಇ) | ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ನೋಂದಾಯಿತ ಕಾರ್ಮಿಕರಿಗೆ ಮತ್ತು ಅವಲಂಬಿತರಿಗೆ ನೀಡುತ್ತಿರುವ ಸಹಾಯಧನ ಹಾಗೂ ಸೌಲಭ್ಯಗಳು ಯಾವುವು? (ವಿವರ ನೀಡುವುದು) | ಮಂಡಳಿಯಿಂದ ನೋಂದಾಯಿತ ಫಲಾನುಭವಿಗಳಿಗೆ ಹಾಗೂ ಅವರ ಅವಲಂಬಿತರಿಗಾಗಿ ರೂಪಿಸಿರುವ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳಡಿ ನೀಡುತ್ತಿರುವ ಸಹಾಯಧನ ವಿವರಗಳನ್ನು **ಅನುಬಂಧ**ದಲ್ಲಿ ಲಗತ್ತಿಸಿದೆ. |

**ಕಾಇ 125 ಎಲ್ ಇಟಿ 2024**

**(ಸಂತೋಷ್ ಎಸ್. ಲಾಡ್)**
**ಕಾರ್ಮಿಕ ಸಚಿವರು**

# ಅನುಬಂಧ

**ಮಂಡಳಿಯ ವತಿಯಿಂದ ಅನುಷ್ಠಾನಗೊಳಿಸಿರುವ ಸೌಲಭ್ಯಗಳು ಮಂಡಳಿಯ ನೋಂದಾಯಿತ ಫಲಾನುಭವಿಗಳಿಗೆ ಮತ್ತುಅವರ ಅವಲಂಭಿತರಿಗೆ ಸಹಾಯಧನ ನೀಡಲು ಈ ಕೆಳಕಂಡ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ರೂಪಿಸಲಾಗಿದೆ:**

1. **ಪಿಂಚಣಿ ಸೌಲಭ್ಯ: ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆ ಮಾಸಿಕ ರೂ. 3,000/-**
2. **ಕುಟುಂಬ ಪಿಂಚಣಿ ಸೌಲಭ್ಯ:** ಮೃತ ಪಿಂಚಣಿದಾರರ ಪತಿ/ಪತ್ನಿಗೆ ಮಾಸಿಕ **ರೂ.1500/-**
3. **ದುರ್ಬಲತೆ ಪಿಂಚಣಿ:** ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾ ಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ /ಭಾಗಶಃ ಅಂಗ ವಿಕಲತೆ ಹೊಂದಿದ್ದರೆ ಮಾಸಿಕ **ರೂ. 2,000/-** ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ **ರೂ. 2,00,000/-** ದವರೆಗೆ ಅನುಗ್ರಹರಾಶಿ ಸಹಾಯಧನ.
4. **ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ** ಮರುಪಾವತಿ ಸೌಲಭ್ಯ (ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
5. **ಟ್ರೈನಿಂಗ್-ಕಮ್-ಟೂಲ್‌ಕಿಟ್ಸ್ ಸೌಲಭ್ಯ (ಶ್ರಮ ಸಾಮರ್ಥ್ಯ): ರೂ. 20,000/- ವರೆಗೆ**
6. **ವಸತಿ ಸೌಲಭ್ಯ (ಕಾರ್ಮಿಕ ಗೃಹಭಾಗ್ಯ): ರೂ.2,00,000/-** ದವರೆಗೆ ಮುಂಗಡ ಸೌಲಭ್ಯ
7. **ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀಬಾಂಡ್):** ಮಹಿಳಾ ಫಲಾನುಭವಿಯ ಮೊದಲ ಎರಡು ಮಗುವಿನ ಜನನಕ್ಕೆ ರೂ. 50,000/-
8. **ಅಂತ್ಯಕ್ರಿಯೆ ವೆಚ್ಚ :ರೂ. 4,000/-** ಹಾಗೂ ಅನುಗ್ರಹ ರಾಶಿ **ರೂ. 71,000/-** ಸಹಾಯಧನ
9. **ಶೈಕ್ಷಣಿಕ ಸಹಾಯಧನ (ಕಲಿಕೆ ಭಾಗ್ಯ): ಫಲಾನುಭವಿಯ ಇಬ್ಬರು ಮಕ್ಕಳ ವಿದ್ಯಾಭ್ಯಾಸಕ್ಕಾಗಿ:**

| ಕ್ರ ಸಂ | ವಿದ್ಯಾಭ್ಯಾಸದ ವಿವರ (ತರಗತಿ ಅಥವಾ ಕೋರ್ಸ್ ಅಥವಾ ಗ್ರೇಡ್) | ವಾರ್ಷಿಕ ಶೈಕ್ಷಣಿಕ ಸಹಾಯಧನ ಮೊತ್ತ (ರೂ. ಗಳಲ್ಲಿ) |
|---|---|---|
| 1 | 1 ರಿಂದ 5 ನೇ ತರಗತಿ | 1,100 |
| 2 | 6 ರಿಂದ 7 ನೇ ತರಗತಿ | 1,250 |
| 3 | 8 ನೇ ತರಗತಿ | 1,350 |
| 4 | 9 ಹಾಗೂ 10ನೇ ತರಗತಿ | 3,000 |
| 5 | ಪ್ರಥಮ ಪಿಯುಸಿ ಮತ್ತು ದ್ವಿತೀಯ ಪಿ.ಯು.ಸಿ | 4,600 |
| 6 | ಪದವಿ | 6,000 |
| 7 | ಬಿಇ / ಬಿ.ಟೆಕ್ ಅಥವಾ ಸಂಬಂಧಪಟ್ಟ ಯೂಜಿ ಕೋರ್ಸ್ | 10,000 |
| 8 | ಸ್ನಾತಕೋತ್ತರ ಪದವಿ | 10,000 |
| 9 | ಪಾಲಿಟೆಕ್ನಿಕ್ / ಡಿಪ್ಲಮಾ/ ಐಟಿಐ | 4,600 |
| 10 | ಬಿಎಸ್‌ಸಿ ನರ್ಸಿಂಗ್/ ಜಿಎನ್‌ಎಮ್/ ಎಎನ್‌ಎಮ್/ ಪಾರಮೆಡಿಕಲ್ ಕೋರ್ಸ್ / ಎಕ್ಸುಲರಿ ನರ್ಸಿಂಗ್ ಆಂಡ್ ಮಿಡ್ವೈಫ್ | 10,000 |

| ಕ್ರ ಸಂ | ವಿದ್ಯಾಭ್ಯಾಸದ ವಿವರ (ತರಗತಿ ಅಥವಾ ಕೋರ್ಸ್ ಅಥವಾ ಗ್ರೇಡ್) | ವಾರ್ಷಿಕ ಶೈಕ್ಷಣಿಕ ಸಹಾಯಧನ ಮೊತ್ತ (ರೂ. ಗಳಲ್ಲಿ) |
|---|---|---|
| 11 | ಬಿ.ಎಡ್ | 6,000 |
| 12 | ವೈದ್ಯಕೀಯ (ಎಮ್‌ಬಿಬಿಎಸ್/ ಬಿಎಎಮ್ ಎಸ್/ ಬಿಡಿಎಸ್/ ಬಿಹೆಚ್‌ಎಮ್ ಎಸ್ ಕೋರ್ಸ್ ಅಥವಾ ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕೋತ್ತರ ಕೋರ್ಸ್ | 11,000 |
| 13 | ಎಲ್‌ಎಲ್ ಬಿ/ಎಲ್ ಎಲ್ ಎಂ | 10,000 |
| 14 | ಎಮ್.ಟೆಕ್/ ಎಮ್ ಇ (ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕೋತ್ತರ ಕೋರ್ಸ್) | 10,000 |
| 15 | ಎಮ್‌ಡಿ ಮೆಡಿಕಲ್ | 12,000 |
| 16 | ಡಿ.ಎಡ್ | 4,600 |
| 17 | ಪಿಹೆಚ್‌ಡಿ / ಎಮ್. ಫಿಲ್ (ಯಾವುದೇ ವಿಷಯ) | 11,000 |
| 18 | ಐಐಟಿ/ಐಐಐಟಿ/ ಐಐಎಮ್/ ಎನ್‌ಐಟಿ/ ಐಐಎಸ್‌ಇಆರ್/ ಎಐಐಎಮ್‌ಎಸ್/ಎನ್‌ಎಲ್‌ಯೂ ಮತ್ತು ಭಾರತ ಸರ್ಕಾರದ ಮಾನ್ಯತೆ ಪಡೆದ ಕೋರ್ಸುಗಳು. | 11,000 |

10. **ವೈದ್ಯಕೀಯ ಸಹಾಯ ಧನ (ಕಾರ್ಮಿಕ ಆರೋಗ್ಯ ಭಾಗ್ಯ):** ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಭಿತರಿಗೆ **ರೂ. 300/- ರಿಂದ ರೂ. 20,000/-**ವರೆಗೆ
11. **ಅಪಘಾತ ಪರಿಹಾರ:** ನೊಂದಾಯಿತ ಕಟ್ಟಡ ಕಾರ್ಮಿಕರು ಮರಣ ಹೊಂದಿದ್ದಲ್ಲಿ **ರೂ. 5,00,000/-**ಸಂಪೂರ್ಣ ಶಾಶ್ವತ ದುರ್ಬಲತೆಯಾದಲ್ಲಿ **ರೂ. 2,00,000/-**
12. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ**): ಹೃದ್ರೋಗ, ಕಿಡ್ನಿ ಜೋಡಣೆ, ಕ್ಯಾನ್ಸರ್ ಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದ ತೊಂದರೆಗೆ ಸಂಬಂಧಿತ ಚಿಕಿತ್ಸೆ, ಮೂತ್ರಪಿಂಡದಲ್ಲಿನ ಕಲ್ಲುತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್ ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ , ಕಿಡ್ನಿಶಸ್ತ್ರ ಚಿಕಿತ್ಸೆ, ಇ.ಎನ್.ಟಿ ಚಿಕಿತ್ಸೆ, ಶಸ್ತ್ರ ಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕುಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರ ಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆಮುರಿತ/ ಡಿಸ್ ಲೊಕೇಶನ್ ಚಿಕಿತ್ಸೆ, ಇತರೆ ಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/-ವರೆಗೆ**
13. **ಮದುವೆ ಸಹಾಯ ಧನ (ಗೃಹ ಲಕ್ಷ್ಮೀ ಬಾಂಡ್):** ಫಲಾನುಭವಿ ಅಥವಾ ಅವರ ಇಬ್ಬರು ಮಕ್ಕಳ ಮದುವೆಗೆ **ತಲಾ ರೂ.60,000/-**
14. **ತಾಯಿ ಮಗು ಸಹಾಯ ಹಸ್ತ:** ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ **ರೂ. 6,000/- ಗಳ** ಸಹಾಯಧನ.